# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 271 |
| ಸದಸ್ಯರ ಹೆಸರು | ಶ್ರೀ. ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 03.02.2021 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷಿ ಕ್ಷೇತ್ರ ಮತ್ತು ರೈತರಲ್ಲಿ ಭರವಸೆ ಮೂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಕೃಷಿ ಕ್ಷೇತ್ರ ಮತ್ತು ರೈತರಲ್ಲಿ ಭರವಸೆ ಮೂಡಿಸಲು ಕೃಷಿ ಇಲಾಖೆ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರಗಳನ್ನು **ಅನುಬಂಧ-1**ರಲ್ಲಿ ನೀಡಲಾಗಿದೆ. ಇದಲ್ಲದೆ, ಯುವಜನತೆ ಕೃಷಿಯತ್ತ ಹೊರಳುವಂತೆ ಮಾಡಲು ಕೃಷಿ ಇಲಾಖೆ ವತಿಯಿಂದ ರೂಪಿಸಿರುವ ಕಾರ್ಯಕ್ರಮಗಳ ವಿವರಗಳನ್ನು **ಅನುಬಂಧ-2**ರಲ್ಲಿ ನೀಡಲಾಗಿದೆ.<br>ಜಲಾನಯನ ಅಭಿವೃದ್ಧಿ ಯೋಜನೆಯಲ್ಲಿ ಕೃಷಿ ಚಟುವಟಿಕೆಯನ್ನು ಉತ್ತೇಜಿಸಲು ರೈತರ ಉತ್ಪಾದನೆ ವೃದ್ಧಿಸಲು, ಕೃಷಿಕರ ಬೆಳೆಗಳಿಗೆ ಸರಳ ಹಾಗೂ ಸುವ್ಯವಸ್ಥಿತ ಮಾರುಕಟ್ಟೆ ಒದಗಿಸಲು ಬೆಳೆಗಳಿಗೆ ಸೂಕ್ತ ಬೆಲೆ ಒದಗಿಸಿಕೊಡಲು ಮತ್ತು ರೈತರನ್ನು ಆರ್ಥಿಕವಾಗಿ ಸಬಲಗೊಳಿಸುವ ನಿಟ್ಟಿನಲ್ಲಿ ಸರ್ಕಾರವು 2018-19ನೇ ಸಾಲಿನಿಂದ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರ ಕೃಷಿ ಅಭಿವೃದ್ಧಿ ಮತ್ತು 2019-20ನೇ ಸಾಲಿನಿಂದ ರೈತ ಉತ್ಪಾದಕರ ಸಂಸ್ಥೆಗಳು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ. |
| ಆ) | ಕೃಷಿ ಕ್ಷೇತ್ರಕ್ಕೆ ಉದ್ದಿಮೆ ಸ್ವರೂಪ ನೀಡುವ ಬಗ್ಗೆ ಸರ್ಕಾರದ ಯೋಜನೆಗಳೇನು? (ಪೂರ್ಣ ವಿವರ ನೀಡುವುದು) | • ರಾಜ್ಯದ ಕೃಷಿಕರಲ್ಲಿ ಹೂಡಿಕೆಯ ಅರಿವನ್ನು ಮೂಡಿಸುವುದರ ಜೊತೆಗೆ ರೈತರನ್ನು/ ಅನ್ವೇಷಕರನ್ನು / ಸಂಶೋಧಕರನ್ನು ಹೂಡಿಕೆದಾರರನ್ನಾಗಿ ಪ್ರೋತ್ಸಾಹಿಸಿ ಅವರುಗಳನ್ನು ನವೋದ್ಯಮಿಗಳಾಗಿ ರೂಪಿಸಲು ಕರ್ನಾಟಕ ರಾಜ್ಯದ ಕೃಷಿ ನವೋದ್ಯಮ ನೀತಿಯನ್ನು ಹಾಗೂ ಕಾರ್ಯಾಚರಣೆಯ ಮಾರ್ಗಸೂಚಿಗಳನ್ನು ತಯಾರಿಸುವ ಸಲುವಾಗಿ ಉನ್ನತ ಮಟ್ಟದ ಕಾರ್ಯ ಪಡೆಯನ್ನು ರಚಿಸಿದ್ದು, ಕರಡು ನೀತಿಯನ್ನು ಸಿದ್ಧಪಡಿಸಲಾಗಿರುತ್ತದೆ.<br>• 2020ರ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯ ಮಂತ್ರಿಗಳು ನೀರಿನ ಭದ್ರತೆ, ಭೂ ಸಂಚಯ ಮತ್ತು ಸಾಮೂಹಿಕ ಕೃಷಿಯನ್ನು ಪ್ರೋತ್ಸಾಹಿಸಲು, ಸೂಕ್ಷ್ಮ ನೀರಾವರಿ ಕೃಷಿಕರ ಉತ್ತೇಜನ, ಕೃಷಿ ಉತ್ಪನ್ನ ಸಂಸ್ಕರಣೆ, ಮಾರುಕಟ್ಟೆಯ ಪ್ರೋತ್ಸಾಹ ಮತ್ತು ಕೃಷಿ ಹಾಗೂ ತೋಟಗಾರಿಕೆಯನ್ನು ಉದ್ದಿಮೆಯಾಗಿ ಪರಿಗಣಿಸಲು ನಮ್ಮ ಸರ್ಕಾರವು ಹೊಸ ಕೃಷಿ ನೀತಿಯನ್ನು ಜಾರಿಗೆ ತರಲಿದೆ ಎಂಬುದಾಗಿ ಘೋಷಿಸಿದ್ದು, ಈ ಅನ್ವಯ ಹೊಸ ಕೃಷಿ ನೀತಿಯನ್ನು ರೂಪಿಸಲು ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಎಲ್ಲಾ ಪಾಲುದಾರರನ್ನೊಳಗೊಂಡಂತೆ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದ್ದು, ನೀತಿಯ ತಯಾರಿಕೆ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |

| | | |
|---|---|---|
| | | ಜಲಾನಯನ ಅಭಿವೃದ್ಧಿ ಯೋಜನೆಗೆ ಸಂಬಂಧಿಸಿದಂತೆ **ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರ ಕೃಷಿ ಅಭಿವೃದ್ಧಿ(PPP-IAD)**:<br><br>ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೃಷಿಯ ಉತ್ಪಾದನೆಯಿಂದ ಹಿಡಿದು ಬಳಕೆಯ ಹಂತದವರೆಗೂ ಸಂಪೂರ್ಣ ಮೌಲ್ಯವೃದ್ಧಿ ಸರಪಳಿಯನ್ನು ಸೂಕ್ತ ಮಧ್ಯಸ್ಥಿಕೆ /ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ಕೃಷಿಯಲ್ಲಿ ಉತ್ಪಾದಕತೆಯನ್ನು ಹೆಚ್ಚಿಸುವುದು ಹಾಗೂ ಕೊಯ್ಲಿನೋತ್ತರ ನಷ್ಟವನ್ನು ಕಡಿಮೆಗೊಳಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಈ ಯೋಜನೆಯಿಂದ ರೈತರಿಗೆ ನೇರ ಮಾರುಕಟ್ಟೆ ಬೆಂಬಲವನ್ನು ನೀಡುವುದರ ಮೂಲಕ ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸುವುದಲ್ಲದೆ, ಸರಿಯಾದ ಸಮಯದಲ್ಲಿ ಮಾರುಕಟ್ಟೆಯಿಂದ ರೈತರು ಉತ್ಪಾದಿಸುವ ಬೆಳೆಗೆ ಸೂಕ್ತ ಬೆಲೆಯನ್ನು ದೊರಕಿಸಿಕೊಡಬಹುದಾಗಿದೆ.<br><br>**ರೈತ ಉತ್ಪಾದಕರ ಸಂಸ್ಥೆಗಳು (FPOs):**<br>ರೈತ ಉತ್ಪಾದಕರ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಣ್ಣ ಹಾಗೂ ಅತಿ ಸಣ್ಣ ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವಲ್ಲಿ ಒಬ್ಬಂಟಿಯಾಗಿ ಎದುರಿಸುವ ಹಲವಾರು ಸವಾಲುಗಳನ್ನು ಪರಿಹರಿಸಬಹುದು. ರೈತ ಉತ್ಪಾದಕರ ಸಂಸ್ಥೆಗಳು ಸ್ಥಳೀಯ ರೈತ ಸಮುದಾಯದ ಸಂಧಾನ ಸಾಮರ್ಥ್ಯವನ್ನು ಹಾಗೂ ವ್ಯವಹಾರಿಕ ಪಾಲುದಾರಿಕೆಯನ್ನು ಅಭಿವೃದ್ಧಿಗೊಳಿಸುವ ಮೂಲಕ ರೈತರ ಆರ್ಥಿಕ ಹಾಗೂ ಔದ್ಯಮಿಕ ಸಂಭಾವ್ಯ ಶಕ್ತಿಯನ್ನು ಸಡಿಲಿಸುವಂತೆ ಮಾಡಬಹುದಾಗಿದೆ. ಈ ಸಂಸ್ಥೆಗಳಿಂದ ಉತ್ಪಾದಕರ ಬೇಡಿಕೆಗೆ ಅನುಗುಣವಾಗಿ ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ಉತ್ಪಾದಕರ ಆರ್ಥಿಕ ಹಾಗೂ ಸಾಮಾಜಿಕ ಲಾಭಗಳನ್ನು ಹೆಚ್ಚಿಸಬಹುದಾಗಿದೆ. |

**ಸಂಖ್ಯೆ: AGRI-ACT/21/ 2021**

(ಬಿ.ಸಿ. ಪಾಟೀಲ್)
**ಕೃಷಿ ಸಚಿವರು**

# ಅನುಬಂಧ-1

## ಕೃಷಿ ಕ್ಷೇತ್ರ ಮತ್ತು ರೈತರಲ್ಲಿ ಭರವಸೆ ಮೂಡಿಸಲು ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರಗಳು

1) **ಬಿತ್ತನೆ ಬೀಜಗಳ ಪೂರೈಕೆ:** ಈ ಯೋಜನೆಯಡಿ ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುವುದು.

2) **ಸಸ್ಯ ಸಂರಕ್ಷಣೆ:** ಈ ಕಾರ್ಯಕ್ರಮದಡಿ ರಾಜ್ಯದಲ್ಲಿ ಬೆಳೆಯುವ ಕೃಷಿ ಬೆಳೆಗಳನ್ನು ಬಾಧಿಸುವ ಕೀಟ ರೋಗಗಳ ನಿರ್ವಹಣೆ ಹಾಗೂ ಸಂಗ್ರಹಿಸಿದ ಧಾನ್ಯಗಳನ್ನು ಕೀಟ-ರೋಗಗಳಿಂದ ಸಂರಕ್ಷಿಸಲು ತಾಂತ್ರಿಕತೆ/ ತಂತ್ರಜ್ಞಾನ ನೀಡುವುದು. ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಬೀಜ, ರಸಗೊಬ್ಬರ ಮತ್ತು ಕೀಟನಾಶಕ ಕಾಯ್ದೆ ಮತ್ತು ಕಾನೂನು ಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಗುವುದು. ಜೈವಿಕ ಪೀಡೆನಾಶಕಗಳು ಮತ್ತು ಸಸ್ಯ ಸಂರಕ್ಷಣಾ ಔಷಧಿಗಳನ್ನು ಎಲ್ಲಾ ವರ್ಗದ ರೈತರಿಗೆ ಶೇ.50 ಸಹಾಯಧನವನ್ನು ನೀಡಲಾಗುತ್ತಿದೆ. ಇದಲ್ಲದೆ, ಬೀಜೋಪಚಾರ ಅಂದೋಲನ ಮತ್ತು ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ಎಲ್ಲಾ ರೈತರಿಗೆ ತರಬೇತಿಗಳನ್ನು ಆಯೋಜಿಸಲಾಗುತ್ತದೆ.

3) **ಮಣ್ಣಿನ ಸತ್ವ ಹೆಚ್ಚಿಸುವಿಕೆ :** ಮಣ್ಣಿನ ಫಲವತ್ತತೆ ಮತ್ತು ಬೆಳೆ ಉತ್ಪಾದಕತೆಯನ್ನು ಹೆಚ್ಚಿಸಲು ಜೈವಿಕ ಗೊಬ್ಬರಗಳು, ಲಘುಪೋಷಕಾಂಶಗಳು, ಜಿಪ್ಸಂ, ಕೃಷಿ ಸುಣ್ಣ/ಡೊಲೋಮೈಟ್, ಹಸಿರೆಲೆ ಗೊಬ್ಬರ ಬೀಜ, ಎರೆಹುಳು ಗೊಬ್ಬರ, ಸಾವಯವ ಗೊಬ್ಬರಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನದಡಿ ನೀಡುವುದರ ಜೊತೆಗೆ ಬಯೋಡೈಜೆಸ್ಟರ್ ಘಟಕ ಮತ್ತು ಎರೆಹುಳು ಗೊಬ್ಬರ ಉತ್ಪಾದನೆ ಘಟಕ ಸ್ಥಾಪನೆಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನವನ್ನು ನೀಡಲಾಗುತ್ತಿದೆ.

4) **ಕೃಷಿ ಯಾಂತ್ರೀಕರಣ ಮತ್ತು ಕೃಷಿ ಸಂಸ್ಕರಣೆ :** ಈ ಕಾರ್ಯಕ್ರಮದಡಿ ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಹಾಗೂ ಕೃಷಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುವುದು (ಸಾಮಾನ್ಯ ವರ್ಗದ ರೈತರಿಗೆ ಶೇ. 50 ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90) ಸಣ್ಣ ಟ್ರ್ಯಾಕ್ಟರ್ ಖರೀದಿಗೆ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಸಣ್ಣ ಟ್ರ್ಯಾಕ್ಟರುಗಳಿಗೆ ರೂ.3.00ಲಕ್ಷ ಸಹಾಯಧನ ನೀಡಲಾಗುವುದು. ಕೃಷಿ ಸಂಸ್ಕರಣೆ ಘಟಕಗಳು ಮತ್ತು ಟಾರ್ಪಾಲೀನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ. 50 ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರ ಸಹಾಯಧನವನ್ನು ನೀಡಲಾಗುತ್ತದೆ.

5) **ಕೃಷಿ ಯಂತ್ರಧಾರೆ:** ರಾಜ್ಯದಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುವಾಗುವಂತೆ, ಕಡಿಮೆ ಬಾಡಿಗೆ ದರದಲ್ಲಿ ಭೂಮಿ ಸಿದ್ಧತೆಯಿಂದ ಕೊಯ್ಲು ಮತ್ತು ಸಂಸ್ಕರಣೆಗೆ ಉಪಯುಕ್ತವಾಗುವ ವಿವಿಧ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದ ಮೇಲೆ ಉಪಯೋಗಿಸಲು ಅವಕಾಶ ಕಲ್ಪಿಸಲು ಹೋಬಳಿ ಕೇಂದ್ರಗಳಲ್ಲಿ ಆಯ್ದ ಸಂಸ್ಥೆಗಳ ಸಹಯೋಗದೊಂದಿಗೆ ಕೃಷಿ ಯಂತ್ರಧಾರೆ (ಕೃಷಿ ಯಂತ್ರೋಪಕರಣ ಬಾಡಿಗೆ ಆಧಾರಿತ ಸೇವಾ) ಕೇಂದ್ರಗಳನ್ನು ತೆರೆಯಲಾಗಿರುತ್ತದೆ.

6) **ಸಾವಯವ ಕೃಷಿ ಮತ್ತು ಶೂನ್ಯ ಬಂಡವಾಳ ನೈಸರ್ಗಿಕ ಕೃಷಿ:** ಸಾವಯವ ಭಾಗ್ಯ ಯೋಜನೆಯಡಿ ಸಾವಯವ ಕೃಷಿ ಪದ್ಧತಿಗೆ ಅಳವಡಿಸಿರುವ ಪ್ರದೇಶವನ್ನು ಸಾವಯವ ಗುಂಪು ಪ್ರಮಾಣೀಕರಣಕ್ಕೆ ಒಳಪಡಿಸಲು ಸಹಾಯಧನ ನೀಡಲಾಗುವುದು. ಇದಲ್ಲದೆ, ಶೂನ್ಯ ಬಂಡವಾಳ ಕೃಷಿ ಉತ್ಪಾದನಾ ಪದ್ಧತಿಯನ್ನು ಕೃಷಿ ವಿಶ್ವವಿದ್ಯಾನಿಲಯಗಳ ಮೂಲಕ ವೈಜ್ಞಾನಿಕವಾಗಿ ಮೌಲ್ಯೀಕರಿಸಲು ಅನುದಾನವನ್ನು ಕಲ್ಪಿಸಲಾಗಿದೆ.

7) **ರೈತ ಸಿರಿ:** ಈ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು.

8) **ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ:** ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಸಾಗುವಳಿ ಭೂಮಿ ಹೊಂದಿರುವ ಎಲ್ಲಾ ಅರ್ಹ ರೈತರಿಗೆ ವಾರ್ಷಿಕರೂ. **6000/**-ಗಳ ನಗದನ್ನು ರೂ.**2000/**-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುವುದು. ಕೇಂದ್ರ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯ ಎಲ್ಲಾ ಅರ್ಹ ರೈತರಿಗೆ ದಿನಾಂಕ 14.08.2019 ರಿಂದ ರಾಜ್ಯ ಸರ್ಕಾರವು ಹೆಚ್ಚುವರಿಯಾಗಿ ರೂ.**4000**/ಗಳನ್ನು ಎರಡು ಕಂತುಗಳಲ್ಲಿ ಆರ್ಥಿಕ ನೆರವನ್ನು **ಪಿ.ಎಂ.ಕಿಸಾನ್-ಕರ್ನಾಟಕ** ಯೋಜನೆಯಡಿ ನೀಡಲಾಗುತ್ತಿದೆ.

9) **ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ**: ಈ ಯೋಜನೆಯಡಿ ಪ್ರಕೃತಿ ವಿಕೋಪಗಳು, ಕೀಟಗಳು ಮತ್ತು ರೋಗಗಳಿಂದಾಗಿ ಯಾವುದೇ ಅಧಿಸೂಚಿತ ಬೆಳೆ ವಿಫಲವಾದ ಪಕ್ಷದಲ್ಲಿ ರೈತರಿಗೆ ವಿಮಾ ರಕ್ಷಣೆ ಮತ್ತು ಹಣಕಾಸು ಬೆಂಬಲ ನೀಡಲಾಗುವುದು. ರೈತರಿಗೆ ನೀಡುವ ವಿಮಾ ಕಂತಿನ ರಿಯಾಯಿತಿಯಲ್ಲಿ ರಾಜ್ಯ ಸರ್ಕಾರದ ಪಾಲನ್ನು ನೀಡಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಅನುವು ಮಾಡಲಾಗುವುದು.

10) **ಕೃಷಿ ಪ್ರಶಸ್ತಿ ಮತ್ತು ಕೃಷಿ ಪಂಡಿತ್ ಪ್ರಶಸ್ತಿ**: ರಾಜ್ಯದ ರೈತರಲ್ಲಿ ಹೆಚ್ಚಿನ ಉತ್ಪಾದನೆ ಮಾಡುವ ಮನೋಭಾವ ಉಂಟುಮಾಡಲು ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಸ್ಪರ್ಧೆಗಳನ್ನು ಏರ್ಪಡಿಸಿ ಬಹುಮಾನಗಳನ್ನು(ಕೃಷಿ ಪ್ರಶಸ್ತಿ) ನೀಡಲಾಗುವುದು. ಕೃಷಿ ಕ್ಷೇತ್ರದಲ್ಲಿ ಅಮೂಲ್ಯ ಅನ್ವೇಷಣೆ ಹಾಗೂ ಸೃಜನಾತ್ಮಕ ಕಾರ್ಯಗಳನ್ನು ಕೈಗೊಂಡ ರೈತರನ್ನು ಗುರುತಿಸಿ, ಅವರಿಗೆ ಕೃಷಿ ಪಂಡಿತ ಪ್ರಶಸ್ತಿಯನ್ನು ನೀಡಲಾಗುವುದು.

11) **ಬೆಳೆ ಸಾಲಕ್ಕೆ ಸಹಾಯಧನ**: ಈ ಯೋಜನೆಯಡಿ ರಾಜ್ಯದ ರೈತರಿಗೆ ನೀಡಿದ ಬೆಳೆ ಸಾಲ/ಅಲ್ಪಾವಧಿ ಸಾಲವನ್ನು ನಿಗದಿತ ಅವಧಿಯೊಳಗೆ ಮರುಪಾವತಿ ಮಾಡಿದ ರೈತರಿಗೆ ಶೇ.1ರ ಬಡ್ಡಿ ರಿಯಾಯಿತಿಯನ್ನು(ಸರ್ಕಾರಿ ಸ್ವಾಮ್ಯದ ವಾಣಿಜ್ಯ ಬ್ಯಾಂಕುಗಳು ಹಾಗೂ ಪ್ರಾದೇಶಿಕ ಗ್ರಾಮೀಣಾಭಿವೃದ್ಧಿ ಬ್ಯಾಂಕುಗಳ ಮೂಲಕ) ನೀಡಲಾಗುವುದು.

12) **ಕೃಷಿ ಬೆಲೆ ಆಯೋಗ**: ಕೃಷಿ ಉತ್ಪನ್ನಗಳಿಗೆ ಉತ್ತಮ ಪ್ರತಿಫಲ ಬೆಲೆ ಒದಗಿಸಲು, ಮಾರುಕಟ್ಟೆ ಮೂಲ ಸೌಕರ್ಯವನ್ನು ಉತ್ತಮಗೊಳಿಸಲು, ಬೆಲೆ ಮತ್ತು ಬೆಲೆಯೇತರ ಕ್ರಮಗಳಿಂದ ಮಾರುಕಟ್ಟೆ ಸ್ಥಿರೀಕರಿಸಲು, ಹೆಚ್ಚಿನ ಉತ್ಪಾದನೆ ಸಮಯದಲ್ಲಿ ಮಾರುಕಟ್ಟೆ ಮಧ್ಯೆ ಪ್ರವೇಶ ಮಾಡಲು, ರೈತರಿಗೆ ಲಾಭದಾಯಕ ಬೆಲೆ ಪಡೆಯುವುದಕ್ಕಾಗಿ ಚೌಕಾಶಿ ಸಾಮರ್ಥ್ಯ ಮತ್ತು ಮಾರುಕಟ್ಟೆ ಸುಧಾರಣೆ, ಬೆಳೆ ವಿಮೆ, ಇ-ವ್ಯಾಪಾರ ಇತ್ಯಾದಿಗಳ ಬಗ್ಗೆ ಅಧ್ಯಯನ ಕೈಗೊಂಡು ಸರ್ಕಾರಕ್ಕೆ ಸಲಹೆ/ಶಿಫಾರಸ್ಸು ಮಾಡುವ ಸಲುವಾಗಿ ಕೃಷಿ ಬೆಲೆ ಆಯೋಗವನ್ನು ರಚಿಸಲಾಗಿರುತ್ತದೆ.

13) **ಕೃಷಿ ಅಭಿಯಾನ**- "ಇಲಾಖೆಗಳ ನಡಿಗೆ ರೈತರ ಬಾಗಿಲಿಗೆ"- ಈ ಕಾರ್ಯಕ್ರಮದಡಿ ಹೋಬಳಿ ಮಟ್ಟದಲ್ಲಿ ಕೃಷಿ ಮತ್ತು ಸಂಬಂಧಿಸಿದ ಇಲಾಖೆಗಳಾದ ಜಲಾನಯನ ಅಭಿವೃದ್ಧಿ, ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಅರಣ್ಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗಳ ಸಮಗ್ರ ಕೃಷಿ ಮಾಹಿತಿ ಮತ್ತು ಈ ಎಲ್ಲಾ ಇಲಾಖೆಗಳಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಮಾಹಿತಿಯನ್ನು ಏಕ ಗವಾಕ್ಷಿ ವಿಸ್ತರಣಾ ಪದ್ಧತಿಯಲ್ಲಿ ಪ್ರಚಾರ ನೀಡಲಾಗುವುದು.

14) **ಕೃಷಿ ಮೇಳ ಮತ್ತು ವಸ್ತುಪ್ರದರ್ಶನ**: ಇದರಡಿ ರೈತರಿಗೆ ಸುಧಾರಿತ ತಾಂತ್ರಿಕತೆಗಳನ್ನು ತಲುಪಿಸಲು ಸ್ಥಳೀಯ ಜಾತ್ರೆ ಮತ್ತು ವಿಶೇಷ ಸಂದರ್ಭಗಳಲ್ಲಿ ಇಲಾಖೆಗಳ ಚಟುವಟಿಕೆಗಳ ಕುರಿತು ಪರಿಣಾಮಕಾರಿಯಾಗಿ ಪ್ರಚುರಪಡಿಸಲು ವಸ್ತು ಪ್ರದರ್ಶನ/ ಕಾರ್ಯಾಗಾರ/ ಮೇಳ/ ಸಿಂಪೋಸಿಯಂಗಳನ್ನು ರಾಷ್ಟ್ರ, ಅಂತರ ರಾಜ್ಯ, ರಾಜ್ಯ, ಜಿಲ್ಲಾ, ತಾಲ್ಲೂಕು ಮಟ್ಟದಲ್ಲಿ ಮತ್ತು ಸ್ಥಳೀಯವಾಗಿ ಏರ್ಪಡಿಸಲಾಗುವುದು.

15) **ಕೃಷಿ ವಾರ್ತಾ ಘಟಕ**: ರಾಜ್ಯ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಕೃಷಿಗೆ ಸಂಬಂಧಿಸಿದ ವಿಸ್ತರಣಾ ಸಾಹಿತ್ಯಗಳು/ ಕೃಷಿ ಸಂಬಂಧಿತ ತಾಂತ್ರಿಕ ಪುಸ್ತಕ ಮುದ್ರಣ, ಆಕಾಶವಾಣಿ ಮತ್ತು ದೂರದರ್ಶನ ಕೇಂದ್ರಗಳ ಮೂಲಕ ನೇರ ಫೋನ್-ಇನ್ ಕಾರ್ಯಕ್ರಮಗಳು, ವಿವಿಧ ಮಾಧ್ಯಮಗಳ ಮೂಲಕ ಜಾಹೀರಾತು/ ಪ್ರಕಟಣೆ ಮತ್ತು ಇನ್ನಿತರೆ ಪ್ರಚಾರ ಕಾರ್ಯಗಳನ್ನು ಸದರಿ ಯೋಜನೆಯಡಿ ಕೈಗೊಳ್ಳಲಾಗುವುದು.

16) **ತರಬೇತಿ ಕಾರ್ಯಕ್ರಮಗಳು**: ಈ ಯೋಜನೆಯಡಿ ಕೃಷಿ ವಿಸ್ತರಣಾ ಅಧಿಕಾರಿಗಳ ನಿರ್ವಹಣಾ ಸಾಮರ್ಥ್ಯ ಮತ್ತು ರೈತರ/ ರೈತ ಮಹಿಳೆಯರ ವೃತ್ತಿ ಸಾಮರ್ಥ್ಯವನ್ನು ಹೆಚ್ಚಿಸಲು ಕೃಷಿ ತಾಂತ್ರಿಕತೆಗಳಿಗೆ ಸಂಬಂಧಿಸಿದಂತೆ ವಿಶೇಷ ತರಬೇತಿಗಳನ್ನು ಹಾಗೂ ಅಧ್ಯಯನ ಪ್ರವಾಸಗಳನ್ನು ಆಯೋಜಿಸಲಾಗುವುದು.

17) **ಮಣ್ಣು ಆರೋಗ್ಯ ಕಾರ್ಯಕ್ರಮ:** ರಾಜ್ಯದಲ್ಲಿ ಕೃಷಿ ಹಿಡುವಳಿ ಹೊಂದಿರುವ ಎಲ್ಲಾ ರೈತರಿಗೆ ಮಣ್ಣು ಪರೀಕ್ಷೆ ಶಿಫಾರಸ್ಸುಗಳನ್ನು ಒಳಗೊಂಡ ಮಣ್ಣು ಆರೋಗ್ಯ ಚೀಟಿಗಳನ್ನು ವಿತರಿಸಲಾಗುತ್ತಿದೆ. ಮಣ್ಣು ಆರೋಗ್ಯ ಚೀಟಿ ಶಿಫಾರಸ್ಸಿನ ಅನ್ವಯ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲು ರಿಯಾಯಿತಿ ದರದಲ್ಲಿ ರಸಗೊಬ್ಬರ, ಸಾವಯವ ಗೊಬ್ಬರ, ಜೈವಿಕ ಗೊಬ್ಬರ, ಲಘುಪೋಷಕಾಂಶ ಮಣ್ಣು ಸುಧಾರಕಗಳನ್ನು ಗರಿಷ್ಠ ರೂ.2500/-(ಒಂದು ಹೇಕ್ಟೇರಿಗೆ) ಸಹಾಯಧನ ನೀಡಲಾಗುತ್ತದೆ. ಈ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಮೊದಲು ಮಾದರಿ ಗ್ರಾಮಗಳಲ್ಲಿ ಮಾತ್ರ ಅನುಷ್ಠಾನಗೊಳಿಸಲಾಗುತ್ತಿದೆ. ಇದಲ್ಲದೆ, ಗ್ರಾಮ ಮಟ್ಟದ ಮಣ್ಣು ಪರೀಕ್ಷಾ ಘಟಕಗಳನ್ನು ಸ್ಥಾಪಿಸಲು ಶೇ.75ರ ಸಹಾಯಧನ (ರೂ.3.75ಲಕ್ಷ) ನೀಡಲಾಗುತ್ತಿದೆ.

18) **ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ:** ಈ ಯೋಜನೆಯಡಿ ಬತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ, ಎಣ್ಣೆಕಾಳು, ಕಬ್ಬು ಮತ್ತು ಹತ್ತಿ ಬೆಳೆಗಳ ಉತ್ಪಾದನೆಯನ್ನು ಹೆಚ್ಚಿಸಲು ಆಧುನಿಕ ತಾಂತ್ರಿಕತೆಗಳ ಗುಚ್ಛ ಪ್ರಾತ್ಯಕ್ಷಿಕೆಗಳನ್ನು ಆಯೋಜಿಸುವುದರ ಜೊತೆಗೆ ಬತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ, ಕೃಷಿ ಉಪಕರಣಗಳು, ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಲ್ಲಿ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹ ಧನ ನೀಡಲಾಗುತ್ತದೆ.

19) **ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ:** ರಾಜ್ಯದಲ್ಲಿ ಲಭ್ಯವಿರುವ ನೀರನ್ನು ಸಮರ್ಥ ಮತ್ತು ಸಮರ್ಪಕ ಬಳಕೆಗೆ ಪ್ರೋತ್ಸಾಹಿಸಲು ಹಾಗೂ ಮಿತ ಬಳಕೆಯಿಂದ ಅಧಿಕ ಇಳುವರಿ ಪಡೆಯಲು ಹಾಗೂ ಸೂಕ್ಷ್ಮ (ಹನಿ/ತುಂತುರು) ನೀರಾವರಿ ಪದ್ಧತಿಯ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಹಾಗೂ 2.0ಹೆಕ್ಟೇರಿಗಿಂತ ಮೇಲ್ಪಟ್ಟು 5.0ಹೆಕ್ಟೇರ್ ಪ್ರದೇಶದವರೆಗೆ ಶೇ.45ರ ಸಹಾಯಧನವನ್ನು ನೀಡಲಾಗುತ್ತಿದೆ.

20) **ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ:** ಈ ಯೋಜನೆಯಡಿ ಕೃಷಿ ಮತ್ತು ಸಂಬಂಧಿಸಿದ ವಲಯಗಳಲ್ಲಿ ಹೆಚ್ಚಿನ ಸಾರ್ವಜನಿಕ ಹೂಡಿಕೆಗಾಗಿ ರಾಜ್ಯಗಳನ್ನು ಪ್ರೋತ್ಸಾಹಿಸಲಾಗುತ್ತದೆ. ಜಿಲ್ಲಾ ಕೃಷಿ ಯೋಜನೆಗಳಲ್ಲಿ ಸ್ಥಳೀಯ ಆದ್ಯತೆಗಳು / ಅವಶ್ಯಕತೆಗಳು/ ಬೆಳೆಗಳಿಗೆ ಹೆಚ್ಚಿನ ಪ್ರಾಮುಖ್ಯತೆಯನ್ನು ನೀಡಲು, ಹೊಸ ತಾಂತ್ರಿಕತೆಗಳನ್ನು ಅಳವಡಿಸಿ, ಮುಖ್ಯ ಬೆಳೆಗಳ ಉತ್ಪಾದಕತೆಯಲ್ಲಿ ಇರುವ ವ್ಯತ್ಯಯದ ಪ್ರಮಾಣವನ್ನು ಕಡಿತಗೊಳಿಸಲು, ಕೃಷಿ ಮತ್ತು ಸಂಬಂಧಿತ ವಲಯಗಳ ಎಲ್ಲಾ ಅವಶ್ಯಕತೆಗಳನ್ನು ತೆಗೆದುಕೊಂಡು ಉತ್ಪಾದನೆ/ ಉತ್ಪಾದಕತೆಯ ವಿವಿಧ ಘಟಕಗಳಲ್ಲಿ ಬದಲಾವಣೆ ತರಲು ಮತ್ತು ರೈತರಿಗೆ ಹೆಚ್ಚಿನ ಲಾಭಾಂಶ ದೊರಕಿಸಿಕೊಡಲು ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತದೆ. ಈ ಸಂಬಂಧ, ಕೃಷಿ ಮತ್ತು ಕೃಷಿ ಸಂಬಂಧಿತ ಇಲಾಖೆ/ ಸಂಸ್ಥೆಗಳಿಂದ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

21) **ಕೃಷಿ ವಿಸ್ತರಣೆ ಉಪ ಅಭಿಯಾನ:** ವಿಸ್ತರಣಾ ಸುಧಾರಣೆಗಳಿಗಾಗಿ ರಾಜ್ಯ ವಿಸ್ತರಣಾ ಕಾರ್ಯಕ್ರಮಗಳಿಗೆ ಬೆಂಬಲ ಯೋಜನೆಯು ವಿಸ್ತರಣಾ ಪದ್ಧತಿಯನ್ನು ರೈತರೇ ಮುನ್ನಡೆಸುವ ಹಾಗೂ ರೈತರಿಗೆ ಉತ್ತರದಾಯಿತ್ವವಾಗಬೇಕಾದ ಯೋಜನೆಯಾಗುವ ಗುರಿಯನ್ನು ಹೊಂದಿದೆ. ಭಾಗವಹಿಸುವಿಕೆ ಆಧಾರದ ಮೇಲೆ ವಿಸ್ತರಣಾ ಸುಧಾರಣೆಗಳನ್ನು ಜಾರಿಗೆ ತರಲು ಮತ್ತು ರೈತರಿಗೆ ತಂತ್ರಜ್ಞಾನವನ್ನು ಹೊಸ ಸಾಂಸ್ಥಿಕ ವ್ಯವಸ್ಥೆ ಮೂಲಕ ಪ್ರಸರಿಸುವ ಉದ್ದೇಶದಿಂದ ಜಿಲ್ಲಾ ಮಟ್ಟದಲ್ಲಿ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ(ATMA)ಯನ್ನು ಅಸ್ತಿತ್ವಕ್ಕೆ ತರಲಾಗಿದೆ. ಈ ಯೋಜನೆಯಡಿಯಲ್ಲಿ ಭಾರತ ಸರ್ಕಾರ ನಿಗದಿಪಡಿಸಿರುವ ಮಾರ್ಗಸೂಚಿಯಂತೆ ಅಧಿಕಾರ/ ರೈತರ ತರಬೇತಿ, ಪರಿಚಯ ಪ್ರವಾಸ, ಪ್ರಾತ್ಯಕ್ಷಿಕೆ, ರೈತರ ಗುಂಪು ರಚನೆ, ಕೃಷಿ ಪಾಠಶಾಲೆ, ಕೃಷಿ ಮೇಳ, ಕ್ಷೇತ್ರೋತ್ಸವ ಇತ್ಯಾದಿ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತದೆ.

22) **ಕೃಷಿ ಯಾಂತ್ರೀಕರಣ ಉಪ ಅಭಿಯಾನ:** ಈ ಯೋಜನೆಯ ಉದ್ದೇಶ ಕೃಷಿ ಯಂತ್ರೋಪಕರಣಗಳ ಬಳಕೆಯಿಂದ ಸಾಗುವಳಿ ವಿಸ್ತೀರ್ಣದಲ್ಲಿ ಯಾಂತ್ರೀಕೃತ ಶಕ್ತಿಯನ್ನು ಪ್ರತಿ ಹೆಕ್ಟೇರಿಗೆ 2.0ಕಿಲೋ ವ್ಯಾಟ್ ಗಳಷ್ಟು ಹೆಚ್ಚಿಸುವುದಾಗಿದೆ. ಇದರಡಿ ಕೃಷಿ ಯಂತ್ರೋಪಕರಣಗಳನ್ನು ಪಡೆಯಲು ಹಣಕಾಸಿನ ನೆರವು, ಬಾಡಿಗೆ ಆಧಾರಿತ ಸೇವಾ ಕೇಂದ್ರಗಳಿಗೆ, ಗ್ರಾಮ ಮಟ್ಟದ ಯಂತ್ರೋಪಕರಣಗಳ ಬ್ಯಾಂಕ್/ ಹೈಟೆಕ್ ಉಪಕರಣಗಳ ಹಬ್ ಗಾಗಿ ಹಣಕಾಸಿನ ನೆರವು ನೀಡಲಾಗುವುದು.

23) **ಬಿತ್ತನೆ ಬೀಜ ಉಪ ಅಭಿಯಾನ:** ಈ ಯೋಜನೆಯಡಿ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಮೂಲಕ ರಾಜ್ಯ ಬೀಜೋತ್ಪಾದನಾ ಕೇಂದ್ರಗಳ ಬಲವರ್ಧನೆ, ಬೀಜ ಪರೀಕ್ಷಾ ಪ್ರಯೋಗಾಲಯಗಳ ಬಲವರ್ಧನೆ, ಬೀಜ ಪ್ರಮಾಣನಾ ಸಂಸ್ಥೆಗಳಿಗೆ ಬೆಂಬಲ, ಬೀಜೋಪಚಾರ ಇತ್ಯಾದಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಈ ಯೋಜನೆಯನ್ನು ಸರ್ಕಾರಿ ಸ್ವಾಮ್ಯ ಸಂಸ್ಥೆಗಳು/ ರಾಜ್ಯ ಕೃಷಿ/ತೋಟಗಾರಿಕೆ ವಿಶ್ವವಿದ್ಯಾನಿಲಯಗಳಿಂದ ಅನುಷ್ಠಾನಗೊಳಿಸಲಾಗುವುದು.

24) **ಮಳೆಯಾಶ್ರಿತ ಪ್ರದೇಶ ಅಭಿವೃದ್ಧಿ:** ಈ ಕಾರ್ಯಕ್ರಮದಡಿಯಲ್ಲಿ ಮಳೆಯಾಶ್ರಿತ ಪ್ರದೇಶದಲ್ಲಿ ರೈತರ ಕ್ಷೇತ್ರದಲ್ಲಿ ಸಮಗ್ರ ಕೃಷಿ ಪದ್ಧತಿಯನ್ನು ಪ್ರೋತ್ಸಾಹಿಸಲು ಬಹು ಬೆಳೆ ಪದ್ಧತಿ, ಅಂತರ ಬೆಳೆ, ಮಿಶ್ರಬೆಳೆ (ಏಕದಳ ಧಾನ್ಯ, ದ್ವಿದಳಧಾನ್ಯ ಮತ್ತು ಎಣ್ಣೆಕಾಳು ಆಧಾರಿತ) ಪದ್ಧತಿಗಳು, ತೋಟಗಾರಿಕೆ ಆಧಾರಿತ, ಪಶುಸಂಗೋಪನೆ ಆಧಾರಿತ, ಕೃಷಿ ಅರಣ್ಯ ಆಧಾರಿತ ಬೆಳೆ ಪದ್ಧತಿಗಳ ಅನುಷ್ಠಾನ, ಮಣ್ಣು ಮತ್ತು ನೀರು ಸಂರಕ್ಷಣಾ ಕ್ರಮಗಳು, ಮೌಲ್ಯವರ್ಧನೆ ಮತ್ತು ಸಂಪನ್ಮೂಲಗಳ ಸಂರಕ್ಷಣೆ ಮುಂತಾದ ಘಟಕಗಳನ್ನು ಅನುಷ್ಠಾನ ಮಾಡುವುದರ ಮೂಲಕ ರೈತರ ಆದಾಯವನ್ನು ಹೆಚ್ಚಿಸುವುದರ ಜೊತೆಗೆ ಬರ, ನೆರೆ ಮತ್ತು ಇತರೆ ಹವಾಮಾನ್ಯ ವೈಪರೀತ್ಯಗಳನ್ನು ಎದುರಿಸಲು ಸಜ್ಜುಗೊಳಿಸಲಾಗುತ್ತದೆ. ಇದರಡಿ ಸಮಗ್ರ ಕೃಷಿ ಪದ್ಧತಿ ಅಳವಡಿಕೆಗೆ ಅವಶ್ಯವಿರುವ ಪರಿಕರಗಳು ಇತ್ಯಾದಿಗಳಿಗೆ ಶೇ.50ರ ಸಹಾಯಧನವನ್ನು ನೀಡಲಾಗುವುದು.

25) **ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ:** ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಸಾಗುವಳಿ ಭೂಮಿ ಹೊಂದಿರುವ ಎಲ್ಲಾ ಅರ್ಹ ರೈತರಿಗೆ ವಾರ್ಷಿಕರೂ. **6000/**-ಗಳ ನಗದನ್ನು ರೂ.**2000/**-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುವುದು.

## ಅನುಬಂಧ-2

## ಯುವ ಜನತೆ ಕೃಷಿಯತ್ತ ಹೊರಳುವಂತೆ ಮಾಡಲು ಕೃಷಿ ಇಲಾಖೆ ರೂಪಿಸಿರುವ ವಿವಿಧ ಕಾರ್ಯಕ್ರಮಗಳ ವಿವರ

1. **ಕೃಷಿ ಯಾಂತ್ರೀಕರಣ ಮತ್ತು ಕೃಷಿ ಸಂಸ್ಕರಣೆ :** ಈ ಕಾರ್ಯಕ್ರಮದಡಿ ರೈತರು ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಹಾಗೂ ಕೃಷಿ ಕಾರ್ಮಿಕರ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲು ಕೃಷಿ ಯಂತ್ರೋಪಕರಣಗಳಿಗೆ ಸಹಾಯಧನ ಒದಗಿಸಲಾಗುವುದು (ಸಾಮಾನ್ಯ ವರ್ಗದ ರೈತರಿಗೆ ಶೇ. 50 ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90) ಸಣ್ಣ ಟ್ರ್ಯಾಕ್ಟರ್ ಖರೀದಿಗೆ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಸಣ್ಣ ಟ್ರ್ಯಾಕ್ಟರುಗಳಿಗೆ ರೂ.3.00ಲಕ್ಷ ಸಹಾಯಧನ ನೀಡಲಾಗುವುದು. ಕೃಷಿ ಸಂಸ್ಕರಣೆ ಘಟಕಗಳು ಮತ್ತು ಟಾರ್ಪಾಲೀನ್ ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ. 50 ಮತ್ತು ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.90ರ ಸಹಾಯಧನವನ್ನು ನೀಡಲಾಗುತ್ತಿದೆ.
2. **ಕೃಷಿ ಯಂತ್ರಧಾರೆ:** ರಾಜ್ಯದಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಸಕಾಲದಲ್ಲಿ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುವಾಗುವಂತೆ, ಕಡಿಮೆ ಬಾಡಿಗೆ ದರದಲ್ಲಿ ಭೂಮಿ ಸಿದ್ಧತೆಯಿಂದ ಕೊಯ್ಲು ಮತ್ತು ಸಂಸ್ಕರಣೆಗೆ ಉಪಯುಕ್ತವಾಗುವ ವಿವಿಧ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದ ಮೇಲೆ ಉಪಯೋಗಿಸಲು ಅವಕಾಶ ಕಲ್ಪಿಸಲು ಹೋಬಳಿ ಕೇಂದ್ರಗಳಲ್ಲಿ ಆಯ್ದ ಸಂಸ್ಥೆಗಳ ಸಹಯೋಗದೊಂದಿಗೆ ಕೃಷಿ ಯಂತ್ರಧಾರೆ (ಕೃಷಿ ಯಂತ್ರೋಪಕರಣ ಬಾಡಿಗೆ ಆಧಾರಿತ ಸೇವಾ) ಕೇಂದ್ರಗಳನ್ನು ತೆರೆಯಲಾಗಿರುತ್ತದೆ.
3. **ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ:** ರಾಜ್ಯದಲ್ಲಿ ಲಭ್ಯವಿರುವ ನೀರನ್ನು ಸಮರ್ಥ ಮತ್ತು ಸಮರ್ಪಕ ಬಳಕೆಗೆ ಪ್ರೋತ್ಸಾಹಿಸಲು ಹಾಗೂ ಮಿತ ಬಳಕೆಯಿಂದ ಅಧಿಕ ಇಳುವರಿ ಪಡೆಯಲು ಹಾಗೂ ಸೂಕ್ಷ್ಮ (ಹನಿ/ತುಂತುರು) ನೀರಾವರಿ ಪದ್ಧತಿಯ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಹಾಗೂ 2.0ಹೆಕ್ಟೇರಿಗಿಂತ ಮೇಲ್ಪಟ್ಟು 5.0ಹೆಕ್ಟೇರ್ ಪ್ರದೇಶದವರೆಗೆ ಶೇ.45ರ ಸಹಾಯಧನವನ್ನು ನೀಡಲಾಗುತ್ತಿದೆ.
4. **ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ ಯೋಜನೆಯಡಿ ಮಣ್ಣು ಆರೋಗ್ಯ ನಿರ್ವಹಣೆ** ಯೋಜನೆಯಡಿ ಗ್ರಾಮ ಮಟ್ಟದಲ್ಲಿ ಮಣ್ಣು ಪರೀಕ್ಷಾ ಪ್ರಯೋಗಾಲಯವನ್ನು ಸ್ಥಾಪಿಸಲು (Village level soil testing Lab) ಸ್ಥಾಪಿಸಲು ಆರ್ಥಿಕ ಸಹಾಯವನ್ನು ನೀಡಲಾಗುತ್ತದೆ. ಪ್ರಯೋಗಾಲಯದ ಒಟ್ಟು ವೆಚ್ಚ ರೂ. 5.00 ಲಕ್ಷಗಳಾಗಿದ್ದು, ಫಲಾನುಭವಿಗಳಿಗೆ ಯೋಜನಾ ವೆಚ್ಚದ ಶೇ.75.00ರಷ್ಟು ಆರ್ಥಿಕ ಸಹಾಯವನ್ನು ಸಬ್ಸಿಡಿಯನ್ನಾಗಿ ನೀಡಲಾಗುತ್ತದೆ. ಉಳಿದ ಶೇ. 25.00ರಷ್ಟು ಯೋಜನಾ ವೆಚ್ಚವನ್ನು ಫಲಾನುಭವಿಗಳು ಭರಿಸಬೇಕಿರುತ್ತದೆ. ಮಣ್ಣು ಪರೀಕ್ಷಾ ಪ್ರಯೋಗಾಲಯವನ್ನು ಸ್ಥಾಪಿಸಲು ಕೃಷಿ ಕ್ಲಿನಿಕ್ ಮತ್ತು ಕೃಷಿ ವ್ಯಾಪಾರ ಕೇಂದ್ರಗಳು ( Agri Clinics & Agri Business Centres), ಕೃಷಿ ಉದ್ದಿಮೆದಾರರು, ಮಾಜಿ ಯೋಧರು, ಸ್ವಸಹಾಯ ಸಂಘಗಳು, ರೈತರ ಉತ್ಪಾದಕರ ಸಂಸ್ಥೆಗಳು

(FPOs), ರೈತ ಉತ್ಪನ್ನ ಕಂಪನಿಗಳು, ರೈತರ ಜಂಟಿ ಜವಾಬ್ದಾರಿ ಗುಂಪುಗಳು (Farmer Joint Liability Groups), ರೈತರ ಸಹಕಾರ ಸಂಘಗಳು, PACs, ಪರಿಕರಗಳ ರಿಟೇಲ್ ಔಟ್‌ಲೆಟ್‌ಗಳು, ಪರಿಕರಗಳ ರಿಟೇಲ್‌ದಾರರು, ಶಾಲೆಗಳು / ಕಾಲೇಜುಗಳಿಗೆ ಆರ್ಥಿಕ ಸಹಾಯವನ್ನು ನೀಡಲಾಗುವುದು. ಫಲಾನುಭವಿಗಳು ಕನಿಷ್ಠ ಪಕ್ಷ ಮೆಟ್ರಿಕ್ ನಲ್ಲಿ 2ನೇ ದರ್ಜೆಯಲ್ಲಿ ಉತ್ತೀರ್ಣರಾಗಿರಬೇಕು. ವಿಜ್ಞಾನ ಮತ್ತು ಗಣಕಯಂತ್ರದ ಜ್ಞಾನ ಹೊಂದಿರಬೇಕು.

5. **ಚಿಲ್ಲರೆ ಗೊಬ್ಬರ ಮಾರಾಟ ಪರವಾನಗಿ ವಿತರಣೆ:** ಯುವ ಜನತೆ ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ನೀಡುವ ನಿಟ್ಟಿನಲ್ಲಿ 2016ನೇ ಸಾಲಿನಿಂದ ಚಿಲ್ಲರೆ ಮಾರಾಟಗಾರರಿಗಾಗಿ ಪರವಾನಗಿ ನೀಡಲು ರಸಗೊಬ್ಬರ ನಿಯಂತ್ರಣ ಆದೇಶ 1985ರ ಪ್ರಕಾರ ಅರ್ಜಿದಾರರು ಯಾವುದೇ ರಾಜ್ಯ ಕೃಷಿ ವಿಶ್ವ ವಿದ್ಯಾಲಯ ಅಥವಾ ಕೃಷಿ ವಿಜ್ಞಾನ ಕೇಂದ್ರಗಳು ಅಥವಾ ರಾಷ್ಟ್ರೀಯ ಕೃಷಿ ವಿಸ್ತರಣೆ ನಿರ್ವಹಣೆ ಸಂಸ್ಥೆ (Manage) ಅಥವಾ ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ಸಂಸ್ಥೆಗಳಿಂದ ಕೃಷಿ ವಿಷಯಕ್ಕೆ ಸಂಬಂಧಿಸಿದಂತೆ ಹದಿನೈದು ದಿನಗಳ ಪ್ರಮಾಣ ಪತ್ರ ಕೋರ್ಸ್ ಹೊಂದಿದವರಿಗೆ ಮಾತ್ರ ಚಿಲ್ಲರೆ ಮಾರಾಟ ಪರವಾನಗಿ ನೀಡಲಾಗುತ್ತಿದೆ.
6. **ರಾಷ್ಟ್ರೀಯ ಆಹಾರ ಭದ್ರತಾ ಯೋಜನೆ:** ಯುವ ಜನತೆ ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಳ್ಳಲು ಪ್ರೇರಣೆ ನೀಡುವ ನಿಟ್ಟಿನಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿ ಭತ್ತ, ದ್ವಿದಳಧಾನ್ಯ, ನ್ಯೂಟ್ರಿ ಸೀರಿಯಲ್ಸ್, ಎಣ್ಣೆಕಾಳುಗಳಲ್ಲಿ ವಿವಿಧ ತಾಂತ್ರಿಕತೆಗಳ ಬಗ್ಗೆ ದೊಡ್ಡ ಪ್ರಮಾಣದ ಪ್ರಾತ್ಯಕ್ಷಿಕೆಗಳನ್ನು ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.